# National
# Kannada
# 03.06.2026 19.35 hrs
# ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಪದಗ್ರಹಣ; ಪ್ರಧಾನಿ ಸೇರಿ ಗಣ್ಯರಿಂದ ಅಭಿನಂದನೆ
2. ಹತ್ತು ಸಾವಿರ ಕೋಟಿ ರೂಪಾಯಿಗಳ ಎಟಿಎಫ್ ಬೆಲೆ ಸ್ಥಿರೀಕರಣ ನಿಧಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ
3. ಭಾರತ–ಅಮೆರಿಕ ಮಧ್ಯಂತರ ವ್ಯಾಪಾರ ಒಪ್ಪಂದ ಶೇಕಡ 99 ರಷ್ಟು ಅಂತಿಮ – ಅಮೆರಿಕ ರಾಯಭಾರಿ ಸೆರ್ಗಿಯೊ ಗೋರ್
4. ದೆಹಲಿಯ ಹೋಟೆಲ್‌ನಲ್ಲಿ ಬೆಂಕಿ ಅವಘಡ; 17 ವಿದೇಶಿಯರು ಸೇರಿ ಒಟ್ಟು 21 ಮಂದಿ ಸಾವು
5. ಕುವೈತ್ ಮೇಲೆ ಇರಾನ್ ಡ್ರೋನ್ ದಾಳಿ: ಭಾರತೀಯ ಪ್ರಜೆ ಸಾವು

---

ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಇಂದು ಅಜ್ಜಯ್ಯನ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಅಧಿಕಾರ ಮತ್ತು ಗೌಪ್ಯತಾವಿಧಿಯನ್ನು ಬೋಧಿಸಿದರು.

ನೂತನ ಮುಖ್ಯಮಂತ್ರಿಗೆ ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ ಸಲ್ಲಿಸಿದ್ದಾರೆ. ಕರ್ನಾಟಕ ಸರ್ಕಾರದೊಂದಿಗೆ ಜನರ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರ ನಿಕಟವಾಗಿ ಕಾರ್ಯನಿರ್ವಹಿಸಲಿದೆ ಎಂದು ಪ್ರಧಾನಿ ಹೇಳಿದ್ದಾರೆ.

ಇದೇ ವೇಳೆ ಉಪಮುಖ್ಯಮಂತ್ರಿಯಾಗಿ ಡಾ.ಜಿ.ಪರಮೇಶ್ವರ್ ಹಾಗೂ ಸಂಪುಟ ಸಚಿವರಾಗಿ ಕೆ.ಎಚ್.ಮುನಿಯಪ್ಪ, ಕೆ.ಜೆ.ಜಾರ್ಜ್, ಎಂ.ಬಿ.ಪಾಟೀಲ್, ರಾಮಲಿಂಗಾರೆಡ್ಡಿ, ಸತೀಶ್ ಜಾರಕಿಹೊಳಿ, ಕೃಷ್ಣ ಬೈರೇಗೌಡ, ಪ್ರಿಯಾಂಕ್ ಖರ್ಗೆ, ಯು.ಟಿ.ಖಾದರ್, ಈಶ್ವರ್ ಖಂಡ್ರೆ, ಯತೀಂದ್ರ ಸಿದ್ದರಾಮಯ್ಯ, ಬೈರತಿ ಸುರೇಶ್, ಶರಣ್‌ಪ್ರಕಾಶ್ ಪಾಟೀಲ್ ಪ್ರತಿಜ್ಞಾವಿಧಿ ಸ್ವೀಕರಿಸಿದರು.

ಸಮಾರಂಭದಲ್ಲಿ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಕಾಂಗ್ರೆಸ್ ಹಿರಿಯ ನಾಯಕ ರಾಹುಲ್ ಗಾಂಧಿ, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಕೇರಳಂ ಮುಖ್ಯಮಂತ್ರಿ ವಿ.ಡಿ.ಸತೀಸನ್, ಹಿಮಾಚಲಪ್ರದೇಶ ಮುಖ್ಯಮಂತ್ರಿ ಸುಖ್ವಿಂದರ್ ಸಿಂಗ್ ಸುಖು, ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

---

ಭಾರತೀಯ ವಿಮಾನಯಾನ ಸಂಸ್ಥೆಗಳ ದೇಶೀಯ ಮತ್ತು ಅಂತಾರಾಷ್ಟ್ರೀಯ ಕಾರ್ಯಾಚರಣೆಗಳಿಗೆ ಬೆಂಬಲ ನೀಡಲು ಹತ್ತು ಸಾವಿರ ಕೋಟಿ ರೂಪಾಯಿಗಳ ಎಟಿಎಫ್ ಬೆಲೆ ಸ್ಥಿರೀಕರಣ ನಿಧಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ.

ಈ ಕುರಿತು ನವದೆಹಲಿಯಲ್ಲಿ ಇಂದು ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಇದು ಸ್ವಾವಲಂಬಿ ನಿಧಿಯಾಗಿದ್ದು, ನಿಗದಿತ ಭಾರತೀಯ ವಾಹಕಗಳಿಗೆ ಎಟಿಎಫ್ ಬೆಲೆಗಳನ್ನು ಸ್ಥಿರಗೊಳಿಸಲು ಸಹಾಯ ಮಾಡುತ್ತದೆ. ಈ ನಿರ್ಧಾರವು ವಾಯುಯಾನ ಪರಿಸರ ವ್ಯವಸ್ಥೆಯನ್ನು ಅವಲಂಬಿಸಿರುವ 77 ಲಕ್ಷ ಉದ್ಯೋಗಗಳನ್ನು ರಕ್ಷಿಸುತ್ತವೆ ಎಂದು ತಿಳಿಸಿದರು.

ಪಶ್ಚಿಮ ಏಷ್ಯಾದಲ್ಲಿನ ಬಿಕ್ಕಟ್ಟಿನಿಂದಾಗಿ ಅಂತಾರಾಷ್ಟ್ರೀಯ ಎಟಿಎಫ್ ಬೆಲೆಗಳು ಮಾರ್ಚ್‌ನಲ್ಲಿ ಲೀಟರ್‌ಗೆ 60.5 ರೂಪಾಯಿಗಳಿಂದ ಈ ವರ್ಷದ ಮೇ ತಿಂಗಳಲ್ಲಿ ಲೀಟರ್‌ಗೆ 142 ರೂಪಾಯಿಗಳಿಗೆ 2.5 ಪಟ್ಟು ಹೆಚ್ಚಾಗಿದೆ. ಭಾರತೀಯ ವಿಮಾನಯಾನ ಸಂಸ್ಥೆಗಳಿಗೆ ಎಟಿಎಫ್ ಬೆಲೆ ಸ್ಥಿರೀಕರಣವನ್ನು ಬೆಂಬಲಿಸಲು ತೈಲ ಮಾರುಕಟ್ಟೆ ಕಂಪನಿಗಳಿಗೆ ಬಡ್ಡಿರಹಿತ ಮುಂಗಡವಾಗಿ ಹತ್ತು ಸಾವಿರ ಕೋಟಿ ರೂಪಾಯಿಗಳವರೆಗೆ ಒಂದು ಬಾರಿಯ ಬಜೆಟ್ ಬೆಂಬಲವನ್ನು ನೀಡಲಾಗುವುದು ಎಂದು ಅವರು ಮಾಹಿತಿ ನೀಡಿದರು.

ದೆಹಲಿ ಮತ್ತು ಸುತ್ತಮುತ್ತಲ ಪ್ರದೇಶದಲ್ಲಿ ಹಳೆಯ ಟ್ರಕ್‌ಗಳು ಮತ್ತು ಬಸ್‌ಗಳನ್ನು ಬದಲಾಯಿಸಲು ರಾಷ್ಟ್ರೀಯ ರಾಜಧಾನಿ ಪ್ರದೇಶ ಯೋಜನಾ ಮಂಡಳಿಗೆ ಬೆಂಬಲ ನೀಡುವ ಯೋಜನೆಯನ್ನು ಕೇಂದ್ರ ಸಚಿವ ಸಂಪುಟ ಅನುಮೋದಿಸಿದೆ. ಇದನ್ನು ದೆಹಲಿ, ಹರಿಯಾಣ, ರಾಜಸ್ಥಾನ ಮತ್ತು ಉತ್ತರ ಪ್ರದೇಶ ಕೇಂದ್ರಾಡಳಿತ ಪ್ರದೇಶಗಳ ಸಹಯೋಗದೊಂದಿಗೆ ಜಾರಿಗೆ ತರಲಾಗುವುದು ಎಂದು ಹೇಳಿದರು.

ಎರಡು ವರ್ಷಗಳ ಈ ಮಹತ್ವದ ಯೋಜನೆಯು ದೆಹಲಿ ಮತ್ತು ಸುತ್ತಮುತ್ತಲ ಪ್ರದೇಶದಲ್ಲಿ ವಾಯು ಮಾಲಿನ್ಯವನ್ನು ಕಡಿಮೆ ಮಾಡುವುದು ಮತ್ತು ಸ್ವಚ್ಛ ಚಲನಶೀಲತೆಯನ್ನು ಉತ್ತೇಜಿಸುವ ಗುರಿ ಹೊಂದಿದೆ. ಈ ಯೋಜನೆಯಡಿಯಲ್ಲಿ ಸುಮಾರು ಎರಡು ಲಕ್ಷ ಟ್ರಕ್ ಮತ್ತು 16 ಸಾವಿರ ಬಸ್‌ಗಳನ್ನು ಬದಲಾಯಿಸಲಾಗುವುದು ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

ರಾಮೇಶ್ವರದಿಂದ ಪರದೀಪ್‌ವರೆಗೆ ಒಟ್ಟು 163 ಕಿಲೋಮೀಟರ್‌ಗಳಿಗೂ ಹೆಚ್ಚು ಉದ್ದದ ಹೊಸ ಕರಾವಳಿ ಹೆದ್ದಾರಿ ನಿರ್ಮಾಣಕ್ಕೂ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಯೋಜನೆಯ ಒಟ್ಟು ವೆಚ್ಚ ಎಂಟು ಸಾವಿರದ 300 ಕೋಟಿ ರೂಪಾಯಿಗಳಿಗಿಂತ ಹೆಚ್ಚು ಎಂದು ಅವರು ಮಾಹಿತಿ ನೀಡಿದರು.

---

ಪ್ರಸ್ತಾವಿತ ಭಾರತ–ಅಮೆರಿಕ ಮಧ್ಯಂತರ ವ್ಯಾಪಾರ ಒಪ್ಪಂದವು ಶೇಕಡ 99 ರಷ್ಟು ಅಂತಿಮಗೊಂಡಿದೆ ಎಂದು ಅಮೆರಿಕ ರಾಯಭಾರಿ ಸೆರ್ಗಿಯೊ ಗೋರ್ ತಿಳಿಸಿದ್ದಾರೆ.

ಮುಂಬೈನಲ್ಲಿ ಇಂದು ನಡೆದ ಸಿಟಿ 2026 ಭಾರತ ಸಮ್ಮೇಳನದಲ್ಲಿ ಮಾತನಾಡಿದ ಅವರು, ಮುಂದಿನ ಕೆಲವು ವಾರಗಳಲ್ಲಿ ಒಪ್ಪಂದವನ್ನು ಅಂತಿಮಗೊಳಿಸಬಹುದು ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಮುಖ್ಯ ಸಮಾಲೋಚಕ ಬ್ರೆಂಡನ್ ಲಿಂಚ್ ನೇತೃತ್ವದ ಅಮೆರಿಕ ವ್ಯಾಪಾರ ನಿಯೋಗವು ಪ್ರಸ್ತುತ ನವದೆಹಲಿಯಲ್ಲಿ ವಾಣಿಜ್ಯ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ದರ್ಪಣ್ ಜೈನ್ ನೇತೃತ್ವದ ಭಾರತೀಯ ಸಮಾಲೋಚಕರೊಂದಿಗೆ ಮೂರು ದಿನಗಳ ಮಾತುಕತೆ ನಡೆಸುತ್ತಿದೆ. ನಾಳೆ ಅವರು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರನ್ನು ಭೇಟಿ ಮಾಡಲಿದ್ದಾರೆ.

ಭಾರತ–ಅಮೆರಿಕ ಸಂಬಂಧವು ಆಧುನಿಕ ಕಾಲದ ಅತ್ಯಂತ ಪರಿಣಾಮಕಾರಿ ಪಾಲುದಾರಿಕೆ. ಎರಡೂ ದೇಶಗಳ ನಡುವಿನ ಸಹಕಾರವು ಜಾಗತಿಕ ವ್ಯಾಪಾರ, ತಂತ್ರಜ್ಞಾನ, ಪೂರೈಕೆ ಸರಪಳಿಗಳು ಮತ್ತು ಭದ್ರತೆಯ ಭವಿಷ್ಯವನ್ನು ರೂಪಿಸಲು ಸಹಾಯ ಮಾಡುತ್ತದೆ. ಪ್ರಸ್ತಾವಿತ ಒಪ್ಪಂದವು ಎರಡೂ ದೇಶಗಳ ವ್ಯವಹಾರಗಳು ಮತ್ತು ಕಾರ್ಮಿಕರಿಗೆ ಹೊಸ ಅವಕಾಶಗಳನ್ನು ಸೃಷ್ಟಿಸುತ್ತದೆ. ಅಮೆರಿಕದಲ್ಲಿ ಬಳಸಲಾಗುವ ಶೇಕಡಾ 40 ಕ್ಕಿಂತ ಹೆಚ್ಚು ಜೆನೆರಿಕ್ ಔಷಧಗಳು ಭಾರತದಿಂದಲೇ ಬರುತ್ತವೆ ಎಂದು ಸೆರ್ಗಿಯೊ ಗೋರ್ ಹೇಳಿದರು.

---

ದೆಹಲಿಯ ಮಾಳವೀಯ ನಗರದ ಹೋಟೆಲ್ ಒಂದರಲ್ಲಿ ಇಂದು ಸಂಭವಿಸಿದ ಬೆಂಕಿ ಅವಘಡದಲ್ಲಿ 17 ವಿದೇಶಿಯರು ಸೇರಿ ಒಟ್ಟು 21 ಜನರು ಸಾವನ್ನಪ್ಪಿದ್ದು, 40 ಮಂದಿ ಗಾಯಗೊಂಡಿದ್ದಾರೆ.

ಎಂಟು ಅಗ್ನಿಶಾಮಕ ದಳದವರ ಸಹಾಯದಿಂದ ಬೆಂಕಿಯನ್ನು ನಂದಿಸಲಾಗಿದೆ. ಪೊಲೀಸರು, ಅಗ್ನಿಶಾಮಕ ಸೇವೆಗಳು ಮತ್ತು ಇತರ ತುರ್ತು ಪ್ರತಿಕ್ರಿಯೆ ನೀಡುವವರ ಸಂಘಟಿತ ಪ್ರಯತ್ನಗಳ ಮೂಲಕ 40 ಕ್ಕೂ ಹೆಚ್ಚು ಜನರನ್ನು ರಕ್ಷಿಸಿ, ವೈದ್ಯಕೀಯ ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗಳಿಗೆ ಸ್ಥಳಾಂತರಿಸಲಾಗಿದೆ ಎಂದು ದಕ್ಷಿಣ ದೆಹಲಿಯ ಡಿಸಿಪಿ ಅನಂತ್ ಮಿತ್ತಲ್ ಹೇಳಿದ್ದಾರೆ.

ಬೆಂಕಿ ಅವಘಡದಿಂದ ಸಂಭವಿಸಿದ ಜೀವಹಾನಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.

ಪ್ರಧಾನ ಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ಮೃತರ ಸಂಬಂಧಿಕರಿಗೆ ತಲಾ ಎರಡು ಲಕ್ಷ ರೂಪಾಯಿ ಹಾಗೂ ಗಾಯಾಳುಗಳಿಗೆ 50 ಸಾವಿರ ರೂಪಾಯಿ ಪರಿಹಾರ ನೀಡುವುದಾಗಿ ಪ್ರಧಾನಿ ನರೇಂದ್ರ ಮೋದಿ ಘೋಷಿಸಿದ್ದಾರೆ.

---

ಕುವೈತ್‌ನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೆ ಇಂದು ಮುಂಜಾನೆ ಇರಾನ್ ನಡೆಸಿದ ಡ್ರೋನ್ ದಾಳಿಯಿಂದ ಮುಖ್ಯ ಪ್ರಯಾಣಿಕರ ಟರ್ಮಿನಲ್‌ಗೆ ಭಾರೀ ಹಾನಿಯಾಗಿದೆ. ದಾಳಿಯಲ್ಲಿ ಭಾರತೀಯ ಪ್ರಜೆಯೊಬ್ಬರು ಸಾವನ್ನಪ್ಪಿದ್ದು, ಹಲವು ಜನರು ಗಾಯಗೊಂಡಿದ್ದಾರೆ.

ದಾಳಿಯ ಸಮಯದಲ್ಲಿ ಕುವೈತ್ ವಾಯು ರಕ್ಷಣಾ ವ್ಯವಸ್ಥೆಯು, ಇರಾನಿನ ಹಲವು ಬ್ಯಾಲಿಸ್ಟಿಕ್ ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ತಡೆದಿದೆ.

---

ಚುನಾವಣಾ ಪ್ರಕ್ರಿಯೆಗಳು ಮತ್ತು ಪ್ರಚಾರಗಳಲ್ಲಿ ಮಾಧ್ಯಮಗಳ ಜಾಗತಿಕ ಅತ್ಯುತ್ತಮ ಆಚರಣೆಗಳು ಹಾಗೂ ನಾವೀನ್ಯತೆಗಳ ಕುರಿತು ಚುನಾವಣಾ ಆಯೋಗ ಆಯೋಜಿಸಿರುವ ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನ ಇಂದು ನವದೆಹಲಿಯಲ್ಲಿ ಆರಂಭವಾಗಿದೆ.

ಈ ಸಮ್ಮೇಳನದಲ್ಲಿ ಮಾಧ್ಯಮ ಪ್ರಚಾರದ ಪ್ರಮುಖ ಸವಾಲುಗಳಾದ ತಪ್ಪು ಮಾಹಿತಿ ಮತ್ತು ಸುಳ್ಳು ಸುದ್ದಿಗಳ ಹರಡುವಿಕೆ, ಕೃತಕ ಬುದ್ಧಿಮತ್ತೆ ಆಧಾರಿತ ಡೀಪ್‌ಫೇಕ್ ಹಾಗೂ ಸಿಂಥೆಟಿಕ್ ಮೀಡಿಯಾ, ಅಪಾರದರ್ಶಕ ಡಿಜಿಟಲ್ ರಾಜಕೀಯ ಜಾಹೀರಾತುಗಳು ಮತ್ತು ಸಾಮಾಜಿಕ ಜಾಲತಾಣಗಳ ನಿಯಂತ್ರಣದ ಕುರಿತು ಚರ್ಚೆಗಳು ನಡೆಯಲಿವೆ.

ಸಮ್ಮೇಳನದಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳು, ಮತದಾರರ ನೋಂದಣಾಧಿಕಾರಿಗಳು, ವಿಷಯ ತಜ್ಞರು, ಶಿಕ್ಷಣ ತಜ್ಞರು, ಸಂಶೋಧಕರು ಮತ್ತು ಮತದಾರರ ಸಾಕ್ಷರತಾ ಕ್ಲಬ್ ಸದಸ್ಯರು ಸೇರಿದಂತೆ 480ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿದ್ದಾರೆ.

ಸಮ್ಮೇಳನದಲ್ಲಿ ಮಾತನಾಡಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ದೇಶದ 100 ಕೋಟಿಗೂ ಅಧಿಕ ಮತದಾರರೊಂದಿಗೆ ತಡೆರಹಿತ ಸಂಪರ್ಕವನ್ನು ಖಚಿತಪಡಿಸಿಕೊಳ್ಳಲು ಆಯೋಗವು ಬೂತ್ ಮಟ್ಟದ ಅಧಿಕಾರಿಗಳು ಮತ್ತು ಬೂತ್ ಮಟ್ಟದ ಏಜೆಂಟರು ಸೇರಿದಂತೆ ತಳಮಟ್ಟದ ಕ್ಷೇತ್ರ ಕಾರ್ಯಕರ್ತರಿಗೆ ತರಬೇತಿ ನೀಡುತ್ತಿದೆ ಎಂದು ಹೇಳಿದರು.

---

ಭಾರತವು ಸೌರಶಕ್ತಿ ಉತ್ಪಾದನೆಯಲ್ಲಿ ಅಮೆರಿಕವನ್ನು ಹಿಂದಿಕ್ಕಿ, ವಿಶ್ವದ ಎರಡನೇ ಅತಿ ದೊಡ್ಡ ಸೌರಶಕ್ತಿ ಮಾರುಕಟ್ಟೆಯಾಗಿ ಹೊರಹೊಮ್ಮಿದೆ ಎಂದು ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಸಚಿವರು, 2025ರ ಅಂಕಿ ಅಂಶವನ್ನು ನೀಡಿದ್ದು, ಭಾರತ ಕೇವಲ 14 ತಿಂಗಳಲ್ಲಿ ದಾಖಲೆಯ 50 ಗಿಗಾವ್ಯಾಟ್ ಸೌರ ಸಾಮರ್ಥ್ಯವನ್ನು ಒಗ್ಗೂಡಿಸುವ ಮೂಲಕ ಈ ಮಹತ್ವದ ಮೈಲಿಗಲ್ಲನ್ನು ಸಾಧಿಸಿದೆ ಎಂದರು.

ದೇಶದ ಸೌರಶಕ್ತಿ ಬೆಳವಣಿಗೆಯು ಜಾಗತಿಕ ಮಾನದಂಡಗಳನ್ನು ಸ್ಥಾಪಿಸುತ್ತಿದೆ. ಬಲವಾದ ನೀತಿ ಬೆಂಬಲ, ನಾವೀನ್ಯತೆ ಮತ್ತು ವಿಶ್ವ ದರ್ಜೆಯ ಮೂಲಸೌಕರ್ಯದ ಮೂಲಕ ದಾಖಲೆಯ ಪುಟಗಳನ್ನು ಸೇರಿದೆ ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತದ ಶುದ್ಧ ಇಂಧನ ವೇಗವಾಗಿ ವರ್ಧಿಸುತ್ತಿದೆ. ಇದು ಇಂಧನ ಭದ್ರತೆಯನ್ನು ಬಲಪಡಿಸುತ್ತಿದೆ. ಸುಸ್ಥಿರ ಅಭಿವೃದ್ಧಿಯನ್ನು ಮುನ್ನಡೆಸುತ್ತಿದೆ ಮತ್ತು ನವೀಕರಿಸಬಹುದಾದ ಇಂಧನದಲ್ಲಿ ಜಾಗತಿಕ ನಾಯಕನಾಗಿ ದೇಶದ ಸ್ಥಾನವನ್ನು ಬಲಪಡಿಸುತ್ತಿದೆ ಎಂದು ಸಚಿವರು ತಿಳಿಸಿದರು.

---

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿ ಇಂದು ನೇಪಾಳದ ರಾಷ್ಟ್ರೀಯ ಸ್ವತಂತ್ರ ಪಕ್ಷದ ಅಧ್ಯಕ್ಷ ರಾಬಿ ಲಾಮಿಚಾನೆ ಅವರನ್ನು ಭೇಟಿಯಾದರು.

ಭಾರತದ ನೆರೆ–ಹೊರೆ ಮೊದಲು ನೀತಿಯಡಿಯಲ್ಲಿ ನೇಪಾಳ, ಆದ್ಯತೆಯ ಪಾಲುದಾರ ರಾಷ್ಟ್ರವಾಗಿದೆ. ಎರಡೂ ದೇಶಗಳ ನಡುವಿನ ವಿಶೇಷ ಮತ್ತು ಬಹುಮುಖಿ ಸಂಬಂಧವನ್ನು ಹೆಚ್ಚಿನ ಎತ್ತರಕ್ಕೆ ಏರಿಸಲು ಭಾರತ, ನೇಪಾಳದ ನೂತನ ಸರ್ಕಾರದೊಂದಿಗೆ ಸಹಕರಿಸಲು ಎದುರು ನೋಡುತ್ತಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

__________ ಮುಕ್ತಾಯ __________